# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 102(108) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ), |
| ಉತ್ತರಿಸುವ ದಿನಾಂಕ | : | 19/12/2022. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನರಹಿತ ಶಾಲಾ ಕಾಲೇಜುಗಳ ಶಿಕ್ಷಕರಿಗೂ "ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸುವ ಕುರಿತು ಸರ್ಕಾರಕ್ಕೆ ಬಂದಿರುವ ಮನವಿಗಳೆಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ಅನುದಾನರಹಿತ ಶಾಲಾ ಕಾಲೇಜುಗಳ ಶಿಕ್ಷಕರಿಗೂ "ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸಲು ಕೋರಿ ಜನಪ್ರತಿನಿಧಿಗಳಿಂದ ಹಾಗೂ ನೌಕರರ ಸಂಘಟನೆಗಳಿಂದ ಮನವಿಗಳು ಸ್ವೀಕೃತವಾಗಿರುತ್ತವೆ. |
| ಆ) | ಜ್ಯೋತಿ ಸಂಜೀವಿನಿ ಯೋಜನೆಯನ್ನು ಶಿಕ್ಷಕರಿಗೆ ವಿಸ್ತರಿಸಲು ಇರುವ ಅಡೆತಡೆಗಳೇನು; ಈ ಅಡೆತಡೆಗಳನ್ನು ಸರಿಪಡಿಸಿ ಈ ಯೋಜನೆಗೆ ಶಿಕ್ಷಕರನ್ನು ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |
| ಇ) | ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು? | |

ಸಂಖ್ಯೆ: ಇಪಿ 615 ಎಸ್ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು